## ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 536 |
| 2 | ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 12-12-2024 |
| 4 | ಉತ್ತರಿಸುವವರು | : | ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಆರ್.ಟಿ.ನಗರ ಪೊಲೀಸ್ ಠಾಣೆಯಿಂದ ಡಾ॥ ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೆ ಸಂಪರ್ಕ ಕಲ್ಪಿಸುವ ದಿನ್ನೂರು ಮುಖ್ಯ ರಸ್ತೆಯನ್ನು ಅಗಲೀಕರಣಗೊಳಿಸಿ ಅಭಿವೃದ್ಧಿ ಪಡಿಸಲು ಸುಮಾರು 25 ವರ್ಷಗಳ ಹಿಂದೆ ಯೋಜಿಸಿದ್ದು, ಇಲ್ಲಿಯವರೆಗೆ ಈ ಯೋಜನೆಯನ್ನು ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು; | • ಆರ್.ಟಿ. ನಗರ ಪೊಲೀಸ್ ಠಾಣೆಯಿಂದ ಡಾ॥ ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೆ ಸಂಪರ್ಕ ಕಲ್ಪಿಸುವ ರಸ್ತೆಯಾದ ದಿನ್ನೂರು ಮುಖ್ಯ ರಸ್ತೆಯನ್ನು ಅಗಲೀಕರಣಗೊಳಿಸಿ ಅಭಿವೃದ್ಧಿ ಪಡಿಸಲು ಆರ್.ಎಂ.ಪಿ-2015ರಂತೆ 24.00 ಮೀ ಅಗಲಕ್ಕೆ ಪ್ರಸ್ತಾಪಿಸಲಾಗಿರುತ್ತದೆ.<br>• ಆದರೆ ಸದರಿ ರಸ್ತೆಯ ಇಕ್ಕೆಲಗಳಲ್ಲಿ ಇರುವ ಖಾಸಗಿ ಭೂ-ಮಾಲೀಕರು ಟಿ.ಡಿ.ಆರ್ ಆಧಾರದಲ್ಲಿ ತಮ್ಮ ಭೂಮಿಯನ್ನು ಬಿಟ್ಟುಕೊಡಲು ಒಪ್ಪದೇ ಇದ್ದ ಹಿನ್ನಲೆಯಲ್ಲಿ ಮತ್ತು ನಗದು ರೂಪದಲ್ಲಿ ಭೂ-ಸ್ವಾಧೀನ ಪಡಿಸಿಕೊಳ್ಳಲು ಸುಮಾರು ರೂ.200.00 ಕೋಟಿಗಳಿಗೂ ಅಧಿಕ ಮೊತ್ತ ಬೇಕಾಗುವುದೆಂದು ಅಂದಾಜಿಸಲಾದ ಹಿನ್ನಲೆಯಲ್ಲಿ ಯೋಜನೆಯನ್ನು ಪ್ರಾರಂಭಿಸಲಾಗಿರುವುದಿಲ್ಲ. |
| ಆ) | ಇದರಿಂದಾಗಿ ವಾಹನ ಸವಾರರು, ಆಂಬ್ಯುಲೆನ್ಸ್ ಮತ್ತು ಇತರೆ ವಾಹನ ಸವಾರರಿಗೆ ಸಾಕಷ್ಟು ತೊಂದರೆ ಉಂಟಾಗುವುದಲ್ಲದೇ ವಾಹನ ದಟ್ಟಣೆಯಿಂದ ಪರಿಸರ ಮೇಲೆಯು ಅಡ್ಡ ಪರಿಣಾಮ ಉಂಟಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ; | • ಸದರಿ ವಾಹನ ದಟ್ಟಣೆಯನ್ನು ಕಡಿಮೆಗೊಳಿಸಲು ಆರ್.ಟಿ. ನಗರ ಪೊಲೀಸ್ ಠಾಣೆಯಿಂದ ಡಾ॥ ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೂ ರಸ್ತೆಯ ಸುಗಮ ಸಂಚಾರಕ್ಕಾಗಿ ಡಾಂಬರೀಕರಣವನ್ನು ಮಾಡಲಾಗಿರುತ್ತದೆ.<br>• ಸಮೂಹ ಸಾರಿಗೆ ವ್ಯವಸ್ಥೆಯ ಅಡಿಯಲ್ಲಿ (Mass Transport System) ದಿನ್ನೂರು ಮುಖ್ಯರಸ್ತೆಯನ್ನು ಮೆಟ್ರೋ ಕಾಮಗಾರಿ ನಡೆಯುತ್ತಿರುವ ರಸ್ತೆಗೆ ಸಂಪರ್ಕಿಸುವ ನಾಗವಾರ ರಸ್ತೆಗೆ ಸಂಪರ್ಕ ಕಲ್ಪಿಸಲಾಗುತ್ತಿದೆ.<br>• ಹಾಲಿ ಇರುವ ರಸ್ತೆ ಅಗಲಕ್ಕೆ ಸೀಮಿತಗೊಳಿಸಿ ವೈಟ್ ಟಾಪಿಂಗ್ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ರಾಜ್ಯ ಸರ್ಕಾರದ ವತಿಯಿಂದ 2023-24ನೇ ಆಯವ್ಯಯದಲ್ಲಿ ರೂ.10.19 ಕೋಟಿಗಳನ್ನು ನೀಡಿದ್ದು, ಟೆಂಡರ್ ಅನುಮೋದನೆಗಾಗಿ ಪ್ರಸ್ತಾವನೆ ಪಡೆಯಲಾಗಿದೆ. |

. . .2/-

| | | |
|---|---|---|
| ಇ) | ಇದರಂತೆಯೇ ಟ್ಯಾನರಿ ರಸ್ತೆಯನ್ನು (ಟ್ಯಾನರಿ ರಸ್ತೆಯ ಕಸಾಯಿ ಖಾನೆಯಿಂದ ನಾಗವಾರದವರೆಗೆ) ಸಹ ಅಗಲೀಕರಣಗೊಳಿಸಿ ಅಭಿವೃದ್ಧಿಪಡಿಸಲು ಯೋಜಿಸಲಾಗಿದ್ದು, ಈಗ ಈ ಭಾಗದಲ್ಲಿ ಮೆಟ್ರೋ ಕಾರ್ಯ ಪ್ರಾರಂಭವಾಗಿರುವುದರಿಂದ ವಾಹನ ಸವಾರರಿಗೆ ಸಾಕಷ್ಟು ತೊಂದರೆ ಮತ್ತು ಅಡಚಣೆಗಳು ಉಂಟಾಗುತ್ತಿದ್ದು, ಯಾವುದೇ ಪರ್ಯಾಯ ವ್ಯವಸ್ಥೆಯು ಇಲ್ಲದಿರುವ ಬಗ್ಗೆ ಸರ್ಕಾರದ ಗಮನದಲ್ಲಿಯೇ; ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಂಡಿದೆ ಮತ್ತು ಈ ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? (ಮಾಹಿತಿ ಒದಗಿಸುವುದು) | • ಟ್ಯಾನರಿ ರಸ್ತೆ ಅಗಲೀಕರಣವನ್ನು ಈ ಹಿಂದೆ ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿತ್ತು. ಆದರೆ ಸದರಿ ರಸ್ತೆಯ ಇಕ್ಕೆಲಗಳಲ್ಲಿ ಇರುವ ಖಾಸಗಿ ಭೂ-ಮಾಲೀಕರು ಟಿ.ಡಿ.ಆರ್ ಆಧಾರದಲ್ಲಿ ತಮ್ಮ ಭೂಮಿಯನ್ನು ಬಿಟ್ಟುಕೊಡಲು ಒಪ್ಪದೇ ಇದ್ದ ಹಿನ್ನಲೆಯಲ್ಲಿ ಮತ್ತು ನಗದು ರೂಪದಲ್ಲಿ ಭೂಸ್ವಾಧೀನಪಡಿಸಿಕೊಳ್ಳಲು ಸುಮಾರು ರೂ.300.00 ಕೋಟಿಗಳಿಗೂ ಅಧಿಕ ಮೊತ್ತ ಬೇಕಾಗಬಹುದೆಂದು ಅಂದಾಜಿಸಲಾದ ಹಿನ್ನಲೆಯಲ್ಲಿ, ಸದರಿ ಯೋಜನೆಯನ್ನು ಪ್ರಾರಂಭಿಸಲಾಗಿರುವುದಿಲ್ಲ.<br>• ಮೆಟ್ರೋ ಸ್ಟೇಷನ್ ಕಾಮಗಾರಿಗಳು ಪೂರ್ಣಗೊಂಡು ಕಾರ್ಯಾರಂಭ ಮಾಡುವುದು 2026ಕ್ಕೆ ಯೋಜಿಸಲಾಗಿದೆ ಎಂದು ಮೆಟ್ರೋ ಸಂಸ್ಥೆಯಿಂದ ತಿಳಿಸಲಾಗಿದೆ.<br>• ಮೆಟ್ರೋ ಸ್ಟೇಷನ್ ಪ್ರದೇಶಗಳನ್ನು ಹೊರತುಪಡಿಸಿ ಹಾಲಿ ಇರುವ ರಸ್ತೆ ಅಗಲಕ್ಕೆ ಸೀಮಿತಗೊಳಿಸಿ ವೈಟ್ ಟಾಪಿಂಗ್ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿ ರೂ.23.22 ಕೋಟಿಗಳಿಗೆ ದಿನಾಂಕ: 13-03-2024ರಂದು ಗುತ್ತಿಗೆದಾರರಾದ ಮೆ॥ ಆರ್.ಎನ್.ಎಸ್.ಎಲ್.ಗೆ ಕಾರ್ಯಾದೇಶವನ್ನು ನೀಡಲಾಗಿರುತ್ತದೆ.<br>• ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲು 11 ತಿಂಗಳ ಕಾಲಮಿತಿಯನ್ನು ನಿಗಧಿಪಡಿಸಲಾಗಿರುತ್ತದೆ. |

**ಸಂಖ್ಯೆ: ನಅಇ 580 ಎಂಎನ್‌ವೈ 2024 (ಇ)**

**(ಡಿ ಕೆ ಶಿವಕುಮಾರ್)**
ಉಪ ಮುಖ್ಯಮಂತ್ರಿ